ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 10-07-2017

# ಪತ್ರಿಕಾ ಪ್ರಕಟಣೆ

## ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಭೆ

ಬೆಂಗಳೂರು, ಜುಲೈ 10 (ಕರ್ನಾಟಕ ವಾರ್ತೆ)

ಅಪರಾಧಗಳ ಸಂಖ್ಯೆಯಲ್ಲಿ ಗಣನೀಯ ಇಳಿಕೆಯಾಗಿದ್ದು, ಸರ್ಕಾರ ಪೊಲೀಸ್ ಇಲಾಖೆಗೆ ಹೆಚ್ಚು ಸವಲತ್ತುಗಳನ್ನು ಒದಗಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಇಂದು ಪೊಲೀಸ್ ಮಹಾ ನಿರ್ದೇಶಕರ ಕಚೇರಿಯಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳ ಸಭೆಯ ನಂತರ ಹಮ್ಮಿಕೊಳ್ಳಲಾದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದರು.

ಬೆಂಗಳೂರಿನಲ್ಲಿರುವ ಎಲ್ಲಾ 100 ಪೊಲೀಸ್ ಠಾಣೆಗಳಲ್ಲೂ ಪಿಂಕ್ ಹೊಯ್ಸಳ ವಾಹನವನ್ನು ಒದಗಿಸಲಾಗುವುದು. ಈಗಾಗಲೇ 51 ವಾಹನ ಈ ಕಾರ್ಯ ನಿರ್ವಹಿಸುತ್ತಿವೆ. ಇಲಾಖೆಗೆ ಸಿಬ್ಬಂದಿ, ವಾಹನವನ್ನು ಒದಗಿಸಲು ಸರ್ಕಾರ ಸಿದ್ಧವಿದೆ ಎಂದರು.

ಹೆಣ್ಣು ಮಕ್ಕಳ ದೌರ್ಜನ್ಯ, ಮಾನಹಾನಿ ನಡೆದಲ್ಲಿ ತಕ್ಷಣ ಸಂತ್ರಸ್ತರು 100 ಸಂಖ್ಯೆಗೆ ಕರೆ ಮಾಡಿದರೆ 10 ನಿಮಿಷದೊಳಗಾಗಿ ಪಿಂಕ್ ಹೊಯ್ಸಳ ಅವರ ನೆರವಿಗೆ ಬರುತ್ತದೆ. ಸರಗಳ್ಳತನ, ಒಂಟಿ ಮಹಿಳೆ ಕೊಲೆ ಇತ್ಯಾದಿ ಪ್ರಕರಣಗಳಲ್ಲಿ ಇದು ನೆರವಾಗುತ್ತದೆ. ಒಟ್ಟಾರೆ ಮಹಿಳೆಯರ ರಕ್ಷಣೆ ಸರ್ಕಾರದ ಆದ್ಯ ಕರ್ತವ್ಯಗಳಲ್ಲಿ ಒಂದು ಎಂದರು.

ಇತ್ತೀಚೆಗೆ ಮಂಗಳೂರು ಸುತ್ತಮುತ್ತಲಿನ ಪ್ರದೇಶಗಳಲ್ಲಿ ನಡೆದಿರುವ ಅಹಿತಕರ ಘಟನೆಗಳ ಬಗ್ಗೆ ವಿಷಾದ ವ್ಯಕ್ತಪಡಿಸಿದ ಮುಖ್ಯಮಂತ್ರಿಗಳು ಈ ಪ್ರಕರಣಗಳಲ್ಲಿ ಮತೀಯ ಸಂಘಟನೆಗಳ ಪಾತ್ರವಿದೆ. ಇದಕ್ಕೆ ಕಾರಣರಾದವರು ಯಾವುದೇ ಧರ್ಮಕ್ಕೆ ಸೇರಿರಲಿ ಅವರ ಮೇಲೆ ನಿಗಾ ಇಟ್ಟು. ಕೊಕಾ, ಗೂಂಡಾ ಕಾಯ್ದೆಯಡಿ ಕ್ರಮ ತೆಗೆದುಕೊಂಡು ಗಡಿಪಾರು ಮಾಡಬೇಕೆಂದರು.

ಮಂಗಳೂರು, ಉಡುಪಿ ಜಿಲ್ಲೆಗಳು ಶಾಂತಿಗೆ ಹೆಸರಾದವು. ಈ ಶಾಂತಿಯನ್ನು ಭಂಗ ಮಾಡುವ ಪ್ರಯತ್ನಗಳು ನಡೆಯುತ್ತಿವೆ. ಶಾಂತಿ ಕೆಡಿಸಲು ಪ್ರಯತ್ನ ಮಾಡಿದವರಿಗೆ ಸೆಕ್ಷನ್ 144 ಹಾಗೂ 35 ರನ್ವಯ ಕ್ರಮ ಕೈಗೊಳ್ಳಲಾಗುವುದು. ಪೊಲೀಸರು ಸಹ ಕಾನೂನನ್ನು ಕೈಗೆತ್ತಿಕೊಳ್ಳದೆ ಸಂಯಮದಿಂದ ಕೆಲಸ ನಿರ್ವಹಿಸಿ ಜನಸ್ನೇಹಿಯಾಗಬೇಕೆಂದರು.

ಮತೀಯ ಗೂಂಡಾಗಳಿಗೆ, ತಪ್ಪಿತಸ್ಥರಿಗೆ ಕಾನೂನಿನ ಭಯ ಹುಟ್ಟಿಸಬೇಕು. ಈ ಜಿಲ್ಲೆಗಳಿಗೆ ಭೇಟಿ ನೀಡಿ ವರದಿ ನೀಡುವಂತೆ ಹಿರಿಯ ಅಧಿಕಾರಿಗಳಿಗೆ ತಾವು ಸೂಚಿಸಿರುವುದಾಗಿ ತಿಳಿಸಿದರು.

ಮಕ್ಕಳ ಜೊತೆಗೆ ಸಂಭಾಷಣೆ ನಡೆಸಿದ ಸಂದರ್ಭ ನೆನೆದ ಮುಖ್ಯಮಂತ್ರಿಗಳು, ಮಹದೇವಪುರ ಸುತ್ತಮುತ್ತಲು ಮಾದಕ ವಸ್ತುಗಳು ಸಿಗುತ್ತಿದೆ ಎಂಬ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಪೊಲೀಸರ ಸಹಾಯದಿಂದ ಇದಕ್ಕೆ ಕಡಿವಾಣ ಹಾಕಲಾಗಿದೆ ಎಂದರು.

ಈ ಸಂದರ್ಭದಲ್ಲಿ ರಾಜ್ಯ ಪೊಲೀಸ್ ಮಹಾ ನಿರ್ದೇಶಕರಾದ ಆರ್. ಕೆ. ದತ್ತಾ, ಗೃಹ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳಾದ ಸುಭಾಷ್‌ಚಂದ್ರ, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಎಲ್.ಕೆ. ಅತೀಕ್, ಗೃಹ ಸಚಿವರ ಸಲಹೆಗಾರ ಕೆಂಪಯ್ಯ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

ಎಸ್‌ಎಂ:ಕೆಎನ್‌ಕೆ::ಜಿಪಿಆರ್.

## ನಾಟಕ ರಚನಾ ಕಮ್ಮಟ – ಅರ್ಹ ಬರಹಗಾರರಿಂದ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 10 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ 2017–18 ನೇ ಸಾಲಿನಲ್ಲಿ ಸೃಜನ ಶೀಲ ಸಾಹಿತ್ಯ ಪ್ರಕಾರದಲ್ಲಿ ಮಕ್ಕಳ ಪ್ರತಿಭೆಯನ್ನು ಪ್ರೋತ್ಸಾಹಿಸಲು ಯುವ ಮತ್ತು ಉದಯೋನ್ಮುಖ ಬರಹಗಾರರಿಗೆ ನೆರವು ನೀಡುವ ಮತ್ತು ಮಕ್ಕಳು ಎದುರಿಸುತ್ತಿರುವ ಸವಾಲು ಮತ್ತು ಸಮಸ್ಯೆಗಳ ಕುರಿತ ವಸ್ತು ವಿಷಯಗಳಿಗೆ ಸಂಬಂಧಪಟ್ಟಂತೆ ರಂಗ ನಾಟಕಗಳನ್ನು ರಚಿಸಲು ಆಸಕ್ತ ಮಕ್ಕಳು ಹಾಗೂ ಯುವ ಬರಹಗಾರರನ್ನು "ನಾಟಕ ರಚನಾ ಕಮ್ಮಟ" ಕ್ಕಾಗಿ ರಾಜ್ಯದ ಕಂದಾಯ ವಿಭಾಗಗಳಾದ ಬೆಂಗಳೂರು, ಮೈಸೂರು, ಕಲಬುರಗಿ ಮತ್ತು ಬೆಳಗಾವಿ, ವ್ಯಾಪ್ತಿಯಲ್ಲಿ ಬರುವ ಎಲ್ಲಾ ಜಿಲ್ಲೆಗಳನ್ನು ಒಳಗೊಂಡಂತೆ, ಪ್ರತಿಯೊಂದು ಕಂದಾಯ ವಿಭಾಗದಿಂದ 30 ಮಕ್ಕಳನ್ನು ಹಾಗೂ 10 ಯುವ ಅರ್ಹ ಬರಹಗಾರರನ್ನು ಆಯ್ಕೆ ಮಾಡುವ ಸಲುವಾಗಿ ಅರ್ಜಿಗಳನ್ನು ಆಹ್ವಾನಿಸಿದೆ.

ಅಸಕ್ತ ಅರ್ಹ ಮಕ್ಕಳು, ಯುವ ಮತ್ತು ಉದಯೋನ್ಮುಖ ಬರಹಗಾರರು ತಮ್ಮ ವಯಸ್ಸಿನ ದಾಖಲೆ, ಇತ್ತೀಚಿನ ಭಾವಚಿತ್ರ ಮತ್ತು ಸ್ವತ: ಇತ್ತೀಚೆಗೆ ರಚಿಸಿರುವ ಸೃಜನಶೀಲ ಸಾಹಿತ್ಯ ಪ್ರಕಾರದ ಕನಿಷ್ಠ 10 ಪುಟಗಳಿರುವ ಬರಹವನ್ನು ಸ್ವ–ವಿವರವುಳ್ಳ ಅರ್ಜಿಯೊಂದಿಗೆ ಲಗತ್ತಿಸಿ ಆಯಾ ಜಿಲ್ಲಾ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸಲ್ಲಿಸಬಹುದಾಗಿದೆ. ಮಕ್ಕಳ ವಯೋಮಿತಿ 16 ವಯಸ್ಸಿನ ಒಳಗಿರಬೇಕು ಹಾಗೂ ಯುವ ಬರಹಗಾರರು 40 ವಯಸ್ಸಿನ ಒಳಗಿನವರಾಗಿರಬೇಕು. ಅರ್ಜಿ ಸಲ್ಲಿಸಲು ಜುಲೈ 22 ಕೊನೆಯ ದಿನ ಆಗಿರುತ್ತದೆ.

ಹೆಚ್ಚಿನ ವಿವರಗಳಿಗಾಗಿ ಬೆಂಗಳೂರು ವಲಯ ಸಂಚಾಲಕರಾದ ಸತೀಶ್ ಸಾಸ್ವೆಹಳ್ಳಿ ದೂರವಾಣಿ ಸಂಖ್ಯೆ – 9844367071, ಮೈಸೂರು ವಲಯ ಸಂಚಾಲಕರಾದ ಜನಾರ್ಧನ್ ದೂರವಾಣಿ ಸಂಖ್ಯೆ – 9945780989, ಬೆಳಗಾವಿ ವಲಯ ಸಂಚಾಲಕರಾದ ಶಂಕರ ಹಾಲಗತ್ತಿ ದೂರವಾಣಿ ಸಂಖ್ಯೆ – 7019792585, ಕಲಬುರಗಿ ವಲಯ ಸಂಚಾಲಕರಾದ ಪ್ರಭಾಕರ್ ನಾತಖೇಡ್ ದೂರವಾಣಿ ಸಂಖ್ಯೆ 9448814099/08472–228870 ಹಾಗೂ ಅಶೋಕ್ ಎನ್ ಚಲವಾದಿ, ಜಂಟಿ ನಿರ್ದೇಶಕರು (ಸಾ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ದೂರವಾಣಿ ಸಂಖ್ಯೆ 080–22130912/22221241 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್

# ಉದ್ಯೋಗ ಮೇಳ

ಬೆಂಗಳೂರು, ಜುಲೈ 10 (ಕರ್ನಾಟಕ ವಾರ್ತೆ)

"ವಿಶ್ವ ಕೌಶಲ್ಯ ದಿನಾಚರಣೆ" ಅಂಗವಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಗೂ ಖಾಸಗಿ ನಿಯೋಜಕರುಗಳ ಸಂಯುಕ್ತ ಆಶ್ರಯದಲ್ಲಿ ನಿರುದ್ಯೋಗಿ ಯುವಕ/ಯುವತಿಯರಿಗಾಗಿ ಜುಲೈ 15 ರಂದು ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 4.00 ಗಂಟೆಯವರೆಗೆ ಡಾ.ಬಿ.ಆರ್. ಅಂಬೇಡ್ಕರ್ ರಸ್ತೆಯಲ್ಲಿರುವ ಸರ್ಕಾರಿ ಕಲಾ ಕಾಲೇಜಿನಲ್ಲಿ "ಉದ್ಯೋಗ ಮೇಳ" ವನ್ನು ಹಮ್ಮಿಕೊಂಡಿದೆ.

ಈ ಮೇಳದಲ್ಲಿ ಖಾಸಗಿ ವಲಯದ 30 ಕ್ಕೂ ಹೆಚ್ಚು ಹೆಸರಾಂತ ಸಂಸ್ಥೆಗಳು ಭಾಗವಹಿಸುತ್ತಿದ್ದು, ವಿವಿಧ ತಾಂತ್ರಿಕ ಹಾಗೂ ತಾಂತ್ರಿಕೇತರ ಹುದ್ದೆಗಳಿಗೆ ಸ್ಥಳದಲ್ಲೇ ನೇರವಾಗಿ ಆಯ್ಕೆ ಮಾಡಲಿದ್ದಾರೆ.

ಅಕ್ಷರಸ್ಥರು, ಅರ್ಧದಲ್ಲಿಯೇ ಶಾಲೆ ಬಿಟ್ಟವರು ಹಾಗೂ ಎಸ್.ಎಸ್.ಎಲ್.ಸಿ. ಫೇಲ್/ಪಾಸ್, ಪಿ.ಯು.ಸಿ. ಐ.ಟಿ.ಐ. ಮತ್ತು ಡಿಪ್ಲೊಮಾ (ಎಲ್ಲಾ ಟ್ರೇಡ್‌ಗಳು) ಮತ್ತು ಪದವೀಧರರು ಹಾಗೂ ಸ್ನಾತಕೋತ್ತರ ಪದವಿ ಹೊಂದಿದವರಿಗೆ ಉದ್ಯೋಗ ಅವಕಾಶಗಳು ಲಭ್ಯವಿದೆ. ಉದ್ಯೋಗಾಕಾಂಕ್ಷಿಗಳು ತಮ್ಮ ವೈಯಕ್ತಿಕ ( ಬಯೋಡಾಟಾ) ವಿವರಗಳೊಂದಿಗೆ "ಉದ್ಯೋಗ ಮೇಳ" ದಲ್ಲಿ ಭಾಗವಹಿಸಿ ಉದ್ಯೋಗ ದೊರೆಯುವ ಸದವಾಕಾಶವನ್ನು ಸದುಪಯೋಪಡಿಸಿಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿ ಹಾಗೂ ವಿವರಗಳಿಗಾಗಿ ಈ ಕೆಳಗಿನ ದೂರವಾಣಿ ಸಂಖ್ಯೆ 22289668 / 22261184 / 22374582 / 22268846 / 22259351 ಮೂಲಕ ಸಂಪರ್ಕಿಸಬಹುದಾಗಿದೆ ಎಂದು ಉದ್ಯೋಗ ಮತ್ತು ತರಬೇತಿ ಇಲಾಖೆ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ::ಜಿಪಿಆರ್.